ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ಸೋಮವಾರ, ದಿನಾಂಕ: 23ನೇ ಮಾರ್ಚ್, 2020

ಪದವಿ ಪೂರ್ವ ಕಾಲೇಜು ಉಪನ್ಯಾಸಕರ ನೇಮಕಾತಿ ಬಗ್ಗೆ

ಶ್ರೀ ಅ. ದೇವೇಗೌಡ (ಪದವೀಧರರ ಕ್ಷೇತ್ರ) :-

1438 (1677) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿರುವ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿ ಇರುವ ಉಪನ್ಯಾಸಕರ ಹುದ್ದೆಗಳೆಷ್ಟು ;

(ಆ) ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಯಾವ ಕ್ರಮ ಕೈಗೊಳ್ಳಲಾಗಿದೆ ;

(ಇ) ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿ ಇರುವ ಉಪನ್ಯಾಸಕರ ನೇಮಕಾತಿಗೆ 2015ರಲ್ಲಿ ಅಧಿಸೂಚನೆ ಹೊರಡಿಸಿದ್ದರೂ, ಈವರೆವಿಗೂ ನೇಮಕಾತಿಗೆ ಕ್ರಮ ಕೈಗೊಳ್ಳದಿರಲು ಕಾರಣವೇನು ;

(ಈ) ಖಾಲಿ ಇರುವ ಎಲ್ಲಾ ಉಪನ್ಯಾಸಕರುಗಳ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡ ಕ್ರಮವೇನು ; ಸದರಿ ಹುದ್ದೆಗಳನ್ನು ಯಾವ ಕಾಲಮಿತಿಯೊಳಗೆ ಭರ್ತಿ ಮಾಡಲಾಗುವುದು ಯಾವಾಗ?